ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ತುಮಕೂರು ಜಿಲ್ಲೆಯ ಚಿಕ್ಕನಾಯಕನ ಹಳ್ಳಿ ತಾಲ್ಲೂಕಿನಲ್ಲಿ ಕಳೆದ 3 ವರ್ಷಗಳಲ್ಲಿ ಸರ್ಕಾರಿ ಶಾಲೆಗಳ ಅನುಮತಿ ಕುರಿತು

ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-

1466 (1837) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಕಳೆದ 3 ವರ್ಷಗಳಲ್ಲಿ ಎಷ್ಟು ಹೊಸ ಕಿರಿಯ ಪ್ರಾಥಮಿಕ ಶಾಲೆಗಳಿಗೆ ಅನುಮತಿ ನೀಡಲಾಗಿದೆ ; ಇವುಗಳಲ್ಲಿ ಎಷ್ಟು ಶಾಲೆಗಳು ಸ್ವಂತ ನಿವೇಶನ ಮತ್ತು ಕಟ್ಟಡ ಶೌಚಾಲಯ ಹೊಂದಿದೆ ; (ವಿವರ ನೀಡುವುದು)

(ಆ) ಸದರಿ ತಾಲ್ಲೂಕಿನಲ್ಲಿ ಕಳೆದ 3 ವರ್ಷದಿಂದ ಎಷ್ಟು ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ನವೀಕರಣ ಮಾಡಲಾಗಿದೆ ; ಎಷ್ಟು ವರ್ಷಕ್ಕೆ ನವೀಕರಣ ಮಾಡಲಾಗಿದೆ ; ನವೀಕರಣ ಮಾಡಲು ಏಕ ರೀತಿಯ ಮಾನದಂಡ ಅನುಸರಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಯಾವ ಕ್ರಮ ಕೈಗೊಂಡಿರುತ್ತಾರೆ ; (ನವೀಕರಣ ಶಾಲೆಗಳ ಪೂರ್ಣ ವಿವರ ನೀಡುವುದು)

(ಇ) ಚಿಕ್ಕನಾಯಕನಹಳ್ಳಿ ಟೌನ್, ನೀರು ಬಾಗಿಲು ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿರುವ ವಿದ್ಯಾರ್ಥಿಗಳು, ಶಿಕ್ಷಕರ ಸಂಖ್ಯೆ ಎಷ್ಟು ; ಮಕ್ಕಳ ಹಾಜರಾತಿ ಹೆಚ್ಚಿಸಲು ಏನು ಕ್ರಮ ಕೈಗೊಳ್ಳಲಾಗಿದೆ ; ಈ ಶಾಲೆಗೆ ಕಳೆದ 2 ವರ್ಷದಿಂದ B.E.O ಭೇಟಿ ನೀಡಿರುತ್ತಾರೆಯೇ ;

(ಈ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಕಳೆದ 2 ವರ್ಷಗಳಿಂದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಅಗ್ನಿಶಾಮಕ ನಿರೋಧಕಗಳನ್ನು ಮತ್ತು CCTV ಅಳವಡಿಸಲು ಎಷ್ಟು ಅನುದಾನ ನೀಡಲಾಗಿದೆ ; ಎಷ್ಟು ಶಾಲೆಯಲ್ಲಿ ಅಳವಡಿಸಲಾಗಿದೆ; ಇಲ್ಲದಿದ್ದಲ್ಲಿ ಕಾರಣ ಏನು ; (ವಿವರ ನೀಡುವುದು)

(ಉ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಎಷ್ಟು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಅಳವಡಿಸಲಾಗಿದೆ ; ಇದಕ್ಕೆ ಕಳೆದ 3 ವರ್ಷಗಳಲ್ಲಿ ಬಿಡುಗಡೆಯಾದ ಹಣವೆಷ್ಟು ? (ವಿವರ ನೀಡುವುದು)